# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸಕಾಲ ಸೇವೆಗಳನ್ನು ಆನ್‌ಲೈನ್ ತಂತ್ರಾಂಶದ (ಸೇವಾ ಸಿಂಧು) ಮೂಲಕ ನೀಡುವ ಬಗ್ಗೆ.

ಓದಲಾಗಿದೆ: ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ. 2011 ಮತ್ತು (ತಿದ್ದುಪಡಿ) ಅಧಿನಿಯಮ 2014.

## ಪ್ರಸ್ತಾವನೆ:

ಮೇಲೆ ಓದಲಾದ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ. 2011 ಮತ್ತು (ತಿದ್ದುಪಡಿ) ಅಧಿನಿಯಮ, 2014 ರನ್ವಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಲ್ಪಸಂಖ್ಯಾತರ ನಿರ್ದೇಶನಾಲಯ ವ್ಯಾಪ್ತಿಯಲ್ಲಿ ಬರುವ 6 ನಾಗರಿಕ ಸೇವೆಗಳನ್ನು ಸಕಾಲ ಸೇವೆಗಳ ಅಡಿಯಲ್ಲಿ ಗುರುತಿಸಲಾಗಿದೆ.

ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷೆಯಂತೆ ಸಕಾಲ ಯೋಜನೆಯಡಿ ಅಧಿಸೂಚಿಸಲಾಗಿರುವ ಸೇವೆಗಳನ್ನು ಮತ್ತಷ್ಟು ನಾಗರಿಕ ಸ್ನೇಹಿಯನ್ನಾಗಿಸಲು ವಿಲೇವಾರಿ ಮಾಡುವ ವ್ಯವಸ್ಥೆಯ ಕಾರ್ಯ ಹರಿವಿನ ಎಲ್ಲಾ ಹಂತಗಳಲ್ಲಿ ಕಡ್ಡಾಯವಾಗಿ ಆನ್‌ಲೈನ್ ತಂತ್ರಾಂಶವನ್ನು ಉಪಯೋಗಿಸಲು ಉದ್ದೇಶಿಸಲಾಗಿದೆ. ಸದರಿ ಕ್ರಮವು ನಾಗರೀಕರಿಂದ ನೇರವಾಗಿ ಸ್ವೀಕರಿಸುವ ಆನ್-ಲೈನ್ ಅರ್ಜಿಗಳಿಗೆ ಹಾಗೂ ನಾಗರೀಕ ಸೇವಾ ಕೇಂದ್ರಗಳ ಮೂಲಕ ಸಲ್ಲಿಸುವ ಅರ್ಜಿಗಳಿಗೂ ಸಹ ಕಡ್ಡಾಯವಾಗಿ ಅನ್ವಯಿಸುತ್ತದೆ. ಇದರಿಂದ ನಾಗರೀಕರಿಗೆ ಅತ್ಯಂತ ಸುಲಲಿತವಾಗಿ, ಸರಳವಾಗಿ ಸೇವೆಗಳನ್ನು ನೀಡಿದಂತಾಗುತ್ತದೆ.

ಸೇವಾ ಸಿಂಧು ಯೋಜನೆಯಡಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಲ್ಪಸಂಖ್ಯಾತರ ನಿರ್ದೇಶನಾಲಯದ ವ್ಯಾಪ್ತಿಯಲ್ಲಿ ಇರುವ 6 ಸಕಾಲ ಸೇವೆಗಳನ್ನು ಗುರುತಿಸಿ, ಅವುಗಳಿಗೆ ಆನ್‌ಲೈನ್ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಸದರಿ ಆನ್‌ಲೈನ್ ತಂತ್ರಾಂಶದ ಬಳಕೆಯನ್ನು ಕಡ್ಡಾಯ ಮಾಡುವುದರಿಂದ ಸಕಾಲ ಅಧಿನಿಯಮದ ದತ್ತಾಂಶವನ್ನು ಬೈಪಾಸ್ ಮಾಡುವುದನ್ನು ತಡೆಗಟ್ಟಬಹುದು.

ಈ ಹಿನ್ನಲೆಯಲ್ಲಿ, ಭೌತಿಕವಾಗಿ ಅರ್ಜಿ ಸ್ವೀಕರಿಸುವುದನ್ನು ನಿಲ್ಲಿಸಿ, ಈಗಾಗಲೇ ಅಭಿವೃದ್ಧಿ ಪಡಿಸಲಾಗಿರುವ ಆನ್‌ಲೈನ್ ತಂತ್ರಾಂಶವನ್ನು ಬಳಸಿಕೊಂಡು ಸೇವೆಗಳನ್ನು ಒದಗಿಸುವುದನ್ನು ಕಡ್ಡಾಯ ಮಾಡಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: MWD 273 MDS 2020.
ದಿನಾಂಕ: 24/07/2020

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011 ಮತ್ತು (ತಿದ್ದುಪಡಿ) ಅಧಿನಿಯಮ, 2014 ರನ್ವಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಲ್ಪಸಂಖ್ಯಾತರ ನಿರ್ದೇಶನಾಲಯ ವ್ಯಾಪ್ತಿಯಲ್ಲಿ ಬರುವ ಈ ಕೆಳಕಂಡ ನಾಗರೀಕ ಸೇವೆಗಳನ್ನು ಈಗಾಗಲೇ ಅಭಿವೃದ್ಧಿಪಡಿಸಲಾಗಿರುವ ಆನ್‌ಲೈನ್ ತಂತ್ರಾಂಶವನ್ನು (ಸೇವಾ ಸಿಂಧು)ಬಳಸಿಕೊಂಡು ಸೇವೆಗಳನ್ನು ಒದಗಿಸುವುದನ್ನು ಕಡ್ಡಾಯಗೊಳಿಸಲಾಗಿದೆ ಹಾಗೂ ಯಾವುದೇ ಕಾರಣಕ್ಕೂ ಭೌತಿಕವಾಗಿ ಅರ್ಜಿ ಸ್ವೀಕರಿಸುವುದನ್ನು ಕೂಡಲೇ ನಿಲ್ಲಿಸಲಾಗಿದೆ.

........2

| Sl.No. | Department | Services | Remarks |
|---|---|---|---|
| 1 | Directorate of Minorities | Online application for Admission for the Morarji Desai Residential Schools | |
| 2 | | Online application for Admission for the Minority Pre and Post Matric Hostels | |
| 3 | | Online Application to provide incentives for SSLC and PUC Minority students. | |
| 4 | | Online application for Pre-examination training for Competitive Examinations for Minority students. | |
| 5 | | Online application for Skill development programme | Presently the scheme is not under Minority Department |
| 6 | | Online Application for Vidyasiri. | |

ಈ ಸಂಬಂಧ ಇಲಾಖೆಯ ಎಲ್ಲಾ ಅಧಿಕಾರಿ/ಸಿಬ್ಬಂದಿಗಳಿಗೆ ಮತ್ತು ಸಾರ್ವಜನಿಕರಿಗೆ ಸೂಕ್ತ ತಿಳುವಳಿಕೆಯನ್ನು ನೀಡುವಂತೆ ಇಲಾಖಾ ಮುಖ್ಯಸ್ಥರಿಗೆ ಸೂಚಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

M. Sumitra 24/7/2020
(ಎಂ.ಸುಮಿತ್ರ)
ಸರ್ಕಾರದ ಅಧೀನ ಕಾರ್ಯದರ್ಶಿ.
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಇವರಿಗೆ:

1. ಎಲ್ಲಾ ಜಿಲ್ಲಾಧಿಕಾರಿಗಳು. (ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ರವರ ಮುಖಾಂತರ ಕಳುಹಿಸುವುದು.)
2. ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು. (ನಿರ್ದೇಶಕರು. ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ರವರ ಮುಖಾಂತರ ಕಳುಹಿಸುವುದು.)
3. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ. ವಿ.ವಿ.ಗೋಪುರ, ಬೆಂಗಳೂರು
4. ಎಲ್ಲಾ ಜಿಲ್ಲಾ ಅಧಿಕಾರಿಗಳು. (ನಿರ್ದೇಶಕರು. ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ರವರ ಮುಖಾಂತರ ಕಳುಹಿಸುವುದು.)

ಪ್ರತಿ:

1. ಸಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.ವಿಧಾನಸೌಧ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಆಸುಇ ಇಲಾಖೆ (ಸಕಾಲ) ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ